ಜಿಲ್ಲಾಧಿಕಾರಿಗಳ ಹಾಗೂ
ಜಿಲ್ಲಾ ದಂಡಾಧಿಕಾರಿಗಳ ಕಾರ್ಯಾಲಯ
ಕೊಡಗು ಜಿಲ್ಲೆ, ಮಡಿಕೇರಿ–571201

ಕಛೇರಿ: 08272–225500
ನಿವಾಸ: 08272–225700
ಫ್ಯಾಕ್ಸ್: 08272–225900
ಈ–ಮೇಲ್:deo.kodagu@gmail.com
ವೆಬ್ ಸೈಟ್: http://www.kodagu.nic.in

---

ಸಂಖ್ಯೆ:ಪ್ರ.ವಿ./ 4 /2018–19 ದಿನಾಂಕ: 16–08–2018

## ಅಧಿಕೃತ ಜ್ಞಾಪನ

ವಿಷಯ: ಕೊಡಗು ಜಿಲ್ಲೆಯಾದ್ಯಂತ ಭಾರಿ ಮಳೆಯಾಗುತ್ತಿದ್ದು, ಪ್ರಕೃತಿ ವಿಕೋಪ ಕುರಿತಾಗಿ ನೋಡಲ್ ಅಧಿಕಾರಿಗಳನ್ನು ನೇಮಿಸುವ ಕುರಿತು.

ಉಲ್ಲೇಖ: ಭಾರತೀಯ ಹವಾಮಾನ ಮುನ್ಸೂಚನಾ ಇಲಾಖೆಯ ಪ್ರಕಟಣೆ ದಿನಾಂಕ 14.08.2018

----------

ವಿಷಯಕ್ಕೆ ಸಂಬಂಧಿಸಿದಂತೆ ಕೊಡಗು ಜಿಲ್ಲೆಯಾದ್ಯಂತ ಭಾರೀ ಮಳೆಯಾಗುತ್ತಿದ್ದು, ಹಲವೆಡೆ ಕುಸಿತ ಉಂಟಾಗಿದ್ದು ಹೆದ್ದಾರಿ ಸೇರಿದಂತೆ ಗ್ರಾಮೀಣ ರಸ್ತೆ ಸಂಪರ್ಕ ಕಡಿತಗೊಂಡಿರುತ್ತದೆ. ಗಾಳಿ ಮಳೆಯಿಂದ ನೆಲ ಕುಸಿದು ಹಲವಾರು ಮನೆಗಳಿಗೆ ಹಾನಿಯಾಗಿರುತ್ತದೆ. ನದಿ, ತೋಡು ಮುಂತಾದವುಗಳು ತುಂಬಿ ಹರಿಯುತ್ತಿದ್ದು, ಸಮೀಪದ ಮನೆಗಳು ಜಲಾವೃತಗೊಂಡಿರುತ್ತದೆ. ಜಿಲ್ಲೆಯಲ್ಲಿ ಇನ್ನೂ 4–5 ದಿನಗಳ ಕಾಲ ಭಾರೀ ಮಳೆಯಾಗುವ ಸಂಭವ ಇರುವ ಬಗ್ಗೆ ಉಲ್ಲೇಖದಂತೆ ಸೂಚನೆ ಇರುತ್ತದೆ.

ಜಿಲ್ಲೆಯಲ್ಲಿ ಆಗಬಹುದಾದ ಅಥವಾ ಆಗುತ್ತಿರುವ ಪ್ರಕೃತಿ ವಿಕೋಪ ಅನಾಹುತಗಳಿಗೆ ತುರ್ತಾಗಿ ಸ್ಪಂದಿಸಲು ಸಂಬಂಧಪಟ್ಟ ಎಲ್ಲಾ ಇಲಾಖೆಗಳು ಕಾರ್ಯನಿರ್ವಹಿಸುತ್ತಿದ್ದು, ಈ ಬಗ್ಗೆ ಇನ್ನೂ ಹೆಚ್ಚಿನ ರೀತಿಯಲ್ಲಿ ಪರಿಣಾಮಕಾರಿಯಾಗಿ ಸ್ಪಂದಿಸಲು ಹೋಬಳಿವಾರು ನೋಡಲ್ ಅಧಿಕಾರಿಗಳನ್ನು ಹೆಚ್ಚುವರಿಯಾಗಿ ನೇಮಿಸುವುದು ಸೂಕ್ತವೆಂದು ಕಂಡುಬಂದಿರುತ್ತದೆ. ಆದುದರಿಂದ ಈ ಕೆಳಕಂಡಂತೆ ಹೋಬಳಿವಾರು ನೋಡಲ್ ಅಧಿಕಾರಿಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ನೇಮಕ ಮಾಡಿ ಆದೇಶಿಸಿದೆ.

| ಕ್ರ.ಸಂ. | ಹೆಸರು ಮತ್ತು ಪದನಾಮ | ಮೊಬೈಲ್ ಸಂಖ್ಯೆ | ನೋಡಲ್ ಅಧಿಕಾರಿಯಾಗಿ ನೇಮಕ ಮಾಡಲಾದ ಹೋಬಳಿ |
|---|---|---|---|
| 1 | ಶ್ರೀ ಶಂಶುದ್ದಿನ್,<br>ಭೂ–ದಾಖಲೆಗಳ ಸಹಾಯಕ ನಿರ್ದೇಶಕರು,<br>ಸೋಮವಾರಪೇಟೆ | 9886269299 | ಮಡಿಕೇರಿ |
| 2 | ಶ್ರೀ ಮಲ್ಲೇಸ್ವಾಮಿ,<br>ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಮಡಿಕೇರಿ | 9480984722 | |

| | | | |
|---|---|---|---|
| 3 | ಶ್ರೀ ಶಿವಕುಮಾರ್, ಜಂಟಿ ನಿರ್ದೇಶಕರು, ಕೃಷಿ ಇಲಾಖೆ. ಮಡಿಕೇರಿ | 8277931900 | ನಾಪೋಕ್ಲು |
| 4 | ಶ್ರೀ ರಾಜು, ಉಪ ನಿರ್ದೇಶಕರು, ಕೃಷಿ ಇಲಾಖೆ, ಮಡಿಕೇರಿ | 8277931901 | ಸಂಪಾಜೆ |
| 5 | ಶ್ರೀ ಶಿವಕುಮಾರ್, ಯೋಜನಾ ಸಮನ್ವಯಾಧಿಕಾರಿ, ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆ, ಮಡಿಕೇರಿ | 9741999571 | ಭಾಗಮಂಡಲ |

ಮೇಲ್ಕಂಡಂತೆ ನೇಮಿಸಲಾಗಿರುವ ನೋಡಲ್ ಅಧಿಕಾರಿಗಳ ಮೊಬೈಲ್ / ದೂರವಾಣಿ 24x7 ಸಾರ್ವಜನಿಕರಿಗೆ ಹಾಗೂ ಇಲಾಖೆಗಳ ಅಧಿಕಾರಿಗಳಿಗೆ ಲಭ್ಯವಿರುವಂತೆ ಕ್ರಮಕೈಗೊಳ್ಳುವುದು ಮತ್ತು ಪ್ರಕೃತಿ ವಿಕೋಪ ವಿಚಾರಕ್ಕೆ ಸಂಬಂಧಿಸಿದಂತೆ ಸ್ವೀಕೃತವಾಗುವ ಎಲ್ಲಾ ಕರೆ / ವಿಚಾರಗಳಿಗೆ ಸ್ಪಂದಿಸಿ, ತುರ್ತು ಕ್ರಮಕ್ಕಾಗಿ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳ ಗಮನಕ್ಕೆ ತಂದು ಕ್ರಮ ಕೈಗೊಂಡಿರುವ ಬಗ್ಗೆ ಖಚಿತಪಡಿಸಿಕೊಳ್ಳುವುದು.

ಜಿಲ್ಲಾಧಿಕಾರಿ.
ಕೊಡಗು ಜಿಲ್ಲೆ, ಮಡಿಕೇರಿ.

ಪ್ರತಿಯನ್ನು:

1. ಮೇಲ್ಕಾಣಿಸಿದ ಕೋಷ್ಟಕದಲ್ಲಿನ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
2. ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
3. ಎಲ್ಲಾ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಜಿಲ್ಲಾ ಮಟ್ಟದ ಅಧಿಕಾರಿಗಳ ಮುಖಾಂತರ ಸೂಕ್ತ ಕ್ರಮಕ್ಕಾಗಿ.